ಅಧಿಕಾರಕ್ಕೇರಿದ ಮರುದಿನ ರೈತರ ಬೆಳೆ ಸಾಲ ಮನ್ನಾ

ಕಾಂಗ್ರೆಸ್ ಅಭ್ಯರ್ಥಿ ಜಿ.ಕುಮಾರ ನಾಯಕ ಭರವಸೆ

ರಾಯಚೂರು: ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮರು ದಿನವೇ ರೈತರ ಬೆಳೆ ಸಾಲ ಮನ್ನಾ ಮಾಡಲಾಗುವುದು ಎಂದು ರಾಯಚೂರು ಕಾಂಗ್ರೆಸ್ ಅಭ್ಯರ್ಥಿ ಜಿ.ಕುಮಾರ ನಾಯಕ ಹೇಳಿದರು.ಕಾರ್ಯಕರ್ತರ ಸಭೆಯಲ್ಲಿ ಮತಯಾಚನೆ ಮಾಡಿ

ಮಾತನಾಡಿದ ಅವರು, ದೇಶದಲ್ಲಿ ತಿನ್ನಲು ಅನ್ನ ಇಲ್ಲದಂತಹ ಸಂದರ್ಭದಲ್ಲಿ ಬ್ರಿಟಿಷರು ದೇಶಕ್ಕೆ ಸ್ವಾತಂತ್ರ್ಯ ನೀಡಿದರು. ಆದರೂ ಕಾಂಗ್ರೆಸ್ ಪಕ್ಷ ಸದೃಢ ಭಾರತ ನಿರ್ಮಿಸುವಲ್ಲಿ ಯಶಸ್ವಿಯಾಗಿದೆ ಎಂದರು.ತಮ್ಮ ಜೀವನವೇ ಈ ದೇಶದ ಅಭಿವೃದ್ಧಿಗೆ ಮುಡಿಪಾಗಿ ಇಟ್ಟು ಅಭಿವೃದ್ಧಿಗಾಗಿಯೇ ದುಡಿದವರ ಬಗ್ಗೆ ಈಗಿನ ಬಿಜೆಪಿ ನಾಯಕರು ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ. ದೇಶದ ಜನತೆಗಾಗಿ ಅನ್ನದ ಕೊರತೆ ಇಲ್ಲದಂತೆ ನೀರಾವರಿ ಸೌಲಭ್ಯ, ಉದ್ಯೋಗಕ್ಕಾಗಿ ದೊಡ್ಡ, ದೊಡ್ಡ ಕೈಗಾರಿಕೆಗಳ ಸ್ಥಾಪನೆ, ಸಾರಿಗೆ, ರೈಲು, ವಿಮಾನ, ವಿದ್ಯಾ ಕೇಂದ್ರ, ಆಸ್ಪತ್ರೆಗಳನ್ನು ಕಾಂಗ್ರೆಸ್ ನಿರ್ಮಿಸಿದೆ. ನಿತ್ಯ ಸುಳ್ಳು ಹೇಳಿಕೊಂಡು, ಜನತೆಗೆ ದಾರಿ ತಪ್ಪಿಸುವ ಕೆಲಸ ಮಾಡಿಕೊಂಡಿರುವ ಬಿಜೆಪಿ ನಾಯಕರ ಮಾತಿಗೆ ಜನತೆ ಬೆಲೆ ನೀಡದೇ ತಮ್ಮಗೆ ಬೆಂಬಲಿಸಬೇಕು ಎಂದರು.

500 ರು. ಮುಖಬೆಲೆಯ ನಕಲಿ ನೋಟುಗಳು ಪತ್ತೆ

ನಕಲಿ ನೋಟುಗಳ 62 ಬಂಡಲ್ ವಶಕ್ಕೆ | ಲಿಂಗಸೂಗೂರಿನಲ್ಲಿ ಆರೋಪಿ ಬಂಧನೆ

ರಾಯಚೂರು: ಚುನಾವಣೆ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಖೋಟಾ ನೋಟಿನ ಸದ್ದು ಜೋರಾಗಿದ್ದು, ಈ ರೀತಿ ಪ್ರಕರಣವೊಂದು ಲಿಂಗಸುಗೂರಿನ ಗೌಳಿಪುರದಲ್ಲಿ ಪತ್ತೆಯಾಗಿದೆ. ರದ್ದಿ ಪೇಪರ್ ನಡುವಲ್ಲಿಟ್ಟು 500 ರು, ಮುಖಬೆಲೆಯ ಜೆರಾಕ್ಸ್ ನೋಟನ್ನು ಮೇಲೆ ಮತ್ತು ಕೆಳಗೆ ಇಟ್ಟಿರುವ 62 ಬಂಡಲ್ ಪತ್ತೆಯಾಗಿದೆ.

ಏನಿದು ಪ್ರಕರಣ?: ಗೌಳಿಪುರದ ನಿವಾಸ ಚೋಟುಸಾಬಾ ಅಲಿಯಾಸ್ ಶೆಟ್ಟಿ ಎಂಬುವವರ ಮನೆಯಲ್ಲಿ ಅಕ್ರಮವಾಗಿ ಮದ್ಯ ಸಂಗ್ರಹಿಸಿಡಲಾಗಿದೆ ಎಂಬ ಮಾಹಿತಿ ಪೊಲೀಸರಿಗೆ ಲಭ್ಯವಾಗಿದೆ. ಈ ಮಾಹಿತಿ ಮೇರೆಗೆ ಆತನ ಮನೆ ಶೋಧ ನಡೆಸಿದ್ದಾರೆ. ಈ ವೇಳೆ, ಮನೆಯನ್ನು ಸಂಪೂರ್ಣವಾಗಿ ಶೋಧಿಸಿದಾಗ ಮನೆಯಲ್ಲಿ ಮದ್ಯ ಇನ್ನಿತರ ವಸ್ತುಗಳು ಲಭ್ಯವಾಗಿಲ್ಲ.

ಬದಲಾಗಿ ಅಡುಗೆ ಕೋಣೆಯಲ್ಲಿ ಕಬ್ಬಿಣದ ಟ್ರಂಕ್‌ನಲ್ಲಿ 500 ರು. ಮುಖ ಬೆಲೆಯ ನಕಲಿ ನೋಟಿನ ಬಂಡಲ್‌ಗಳು ಕಂಡು ಬಂದಿದೆ. ಇದನ್ನು ಪರಿಶೀಲಿಸಿದಾಗ ಬಂಡಲ್‌ನ

ಮೇಲ್ಭಾಗ ಮತ್ತು ಕೆಳಭಾಗದಲ್ಲಿ 500 ರು. ಮುಖಬೆಲೆಯ ನಕಲಿ ನೋಟಿನ ಮಧ್ಯೆ ರದ್ದಿ ಪೇಪರ್ ಇರಿಸಲಾಗಿದೆ. ಜನರಿಗೆ ವಂಚನೆ ಮಾಡಿ, ಖೋಟಾ ನೋಟು ಚಲಾವಣೆ ಮಾಡುವ ಉದ್ದೇಶವನ್ನು ಆರೋಪಿ ಹೊಂದಿರುವ ಅನುಮಾನ ವ್ಯಕ್ತವಾಗಿದೆ. ಪ್ರಕರಣ ಸಂಬಂಧ ಆರೋಪಿ ಮತ್ತು ನಕಲಿ ನೋಟಿನ ಬಂಡಲ್ ಅನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಬಳ್ಳಾರಿಯಲ್ಲೂ ಪತ್ತೆಯಾಗಿತ್ತು ಜಾಲ

ಬಳ್ಳಾರಿಯಲ್ಲೂ ಕೂಡ ಆರೋಪಿಗಳಿಬ್ಬರು ಕೋಲಾಚಲಂ ಕಾಂಪೌಂಡ್‌ನಲ್ಲಿರುವ ಮೋಹನ್ ಲಾಡ್ಜ್‌ನಲ್ಲಿ ಖೋಟಾ ನೋಟು ಪ್ರಿಂಟ್ ಮಾಡು ತ್ತಿದ್ದರು. ಈ ಬಗ್ಗೆ ಮಾಹಿತಿ ಸಿಕ್ಕ ಪೊಲೀಸರ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿ ಇಬ್ಬರನ್ನು ಬಂಧಿಸಿದ್ದರು. ಖೋಟಾ ನೋಟುಗಳನ್ನು ತಯಾರು ಮಾಡಲು ಬಳಸುತ್ತಿದ್ದ ಕಲರ್ ಝೆರಾಕ್ಸ್ ಪ್ರಿಂಟರ್ ಅನ್ನು ಬಳಕೆ ಮಾಡಿದ್ದರು.

ಫಯಾಜ್, ಸಲೀಂ ಅಪರಾಧ ಮಾಡುವುದು, ಕಲ್ಲಪ್ಪ ಅಲ್ಲ

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ

ವಿಜಯಪುರ: ನೇಹಾ ತಾಯಿಯ ಎದುರಿಗೆ ಫಯಾಜ್ ಚಾಕುವಿನಿಂದ ಇರಿದು ನೇಹಾಳನ್ನು ಕೊಲೆ ಮಾಡಿದ್ದಾನೆ. ಇಂಥ ಕೆಲಸವನ್ನು ಫಯಾಜ್, ಸಲಿಂ, ಸಲ್ಮಾನ್ ಇಂಥವರೇ ಮಾಡೋದು, ಕಲ್ಲಪ್ಪ, ಮಲ್ಲಪ್ಪ ಇಂಥ ಹಲಕಾ ಕೆಲಸ

ಮಾಡಲ್ಲ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಹುಬ್ಬಳ್ಳಿಯ ಖಾಸಗಿ ಕಾಲೇಜಿನ ಕ್ಯಾಂಪಸ್‌ನಲ್ಲಿ ಕಾರ್ಪೊರೇಟರ್ ನಿರಂಜನ್ ಹಿರೇಮಠ್ ಪುತ್ರಿ ನೇಹಾ ಕೊಲೆ ಪ್ರಕರಣದ ಬಗ್ಗೆ ಮಾತನಾಡಿ, ನೇಹಾ-ಫಯಾಜ್ ನಡುವೆ ಲವ್ ಅಫೇರ್ ಇತ್ತು ಎಂದು ಗೃಹ ಸಚಿವ ಜಿ ಪರಮೇಶ್ವರ್ ಹೇಳಿದ್ದಾರೆ. ನೇಹಾ ಕೊಲೆಯನ್ನು ಆಕಸ್ಮಿಕ ಘಟನೆ ಎಂದು ಸಚಿವ ಶಿವಾನಂದ ಪಾಟೀಲ್ ಹೇಳಿದ್ದು, ನಿನ್ನ ಮಗಳಿಗೆ ಆಗಿದ್ದರೆ ಆಕಸ್ಮಿಕ ಘಟನೆ ಎನ್ನುತ್ತಿದ್ಯಾ? ನಿನ್ನ ಮನೆಯಲ್ಲಿ ಪೂಜೆಯನ್ನು ಮಾಡ್ತಿ, ರೋಜಾನೂ ಮಾಡ್ತಿ, ಯಾಕಂದ್ರೆ ಶೇ.75ರಷ್ಟು ಆ ಕಡೆ ಹೋಗಿಬಿಟ್ಟೇ ಎಂದು ವಾಗ್ದಾಳಿ ನಡೆಸಿದರು. ಪಂಚಮಸಾಲಿಗಳ ಮತ ಕೇಳಲು ನಿನಗೆ ಏನು ನೈತಿಕತೆ ಇದೆಯೇ ಪ್ರಶ್ನಿಸಿದರು.

ಸಮಾಚಾರ ಸಣ್ಣದಲ್ಲ

ಡಾ.ಹೆಗಡೆಗೆ ಶ್ರೇಷ್ಠ ಪಶುವೈದ್ಯ ಪ್ರಶಸ್ತಿ

ಶಿರಸಿ: ಇಲ್ಲಿಯ ಪಶುವೈದ್ಯ ಡಾ.ಪಿ.ಎಸ್.ಹೆಗಡೆ ರಾಜ್ಯಮಟ್ಟದ ಶ್ರೇಷ್ಠ ಪಶುವೈದ್ಯ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಕರ್ನಾಟಕ ಪಶುವೈದ್ಯಕೀಯ ಪರಿ

ಷತ್, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪಶು ವೈದ್ಯಕೀಯ ಕ್ಷೇತ್ರಕ್ಕೆ ಮಹತ್ತರ ಕೊಡುಗೆ ನೀಡಿರುವ, ನೀಡುತ್ತಿರುವ 34 ಪಶುವೈದ್ಯರನ್ನು ಗುರುತಿಸಿ ಪ್ರಶಸ್ತಿ ನೀಡಿ ಸನ್ಮಾನಿಸುತ್ತಿದ್ದು, ಏ.27ರಂದು ವಿಶ್ವ ಪಶು ವೈದ್ಯಕೀಯ ದಿನಾಚರಣೆಯ ದಿನ ಬೆಂಗಳೂರಿನ ಪಶು ವೈದ್ಯ ಪರಿಷತ್ ಸಭಾಭವನದಲ್ಲಿ ಪ್ರಶಸ್ತಿ ಪ್ರದಾನ ನೆರವೇರಲಿದೆ. ಟಿಎಸ್‌ಎಸ್ ಸಮರ್ಪಣದ ವೈದ್ಯರಾದ ಡಾ.ಪಿ.ಎಸ್.ಹೆಗಡೆ 2024ರ ಶ್ರೇಷ್ಠ ಪಶುವೈದ್ಯ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಕಳೆದ 35 ವರ್ಷಗಳಿಂದ ಜಿಲ್ಲೆಯ ಪಶು ವೈದ್ಯಕೀಯ ಕ್ಷೇತ್ರಕ್ಕೆ ಹಲವಾರು ಸಾಧ್ಯತೆಗಳನ್ನು ಪರಿಚಯಿಸಿದ್ದಾರೆ. ಇದೇ ಮೊದಲ ಬಾರಿಗೆ ಕರ್ನಾಟಕ ಪಶು ವೈದ್ಯಕೀಯ ಪರಿಷತ್ ಯಾವುದೇ ಅರ್ಜಿ ಸ್ವೀಕರಿಸದೇ, ಕೊಡುಗೆ ನೀಡಿದವರನ್ನು ಗುರುತಿಸಿ, ಸನ್ಮಾನಿಸುವ ಮಹತ್ಕಾರ್ಯ ನಡೆಸಿದ್ದು ಗಮನಾರ್ಹ.

ರೌಡಿ ಶೀಟರ್‌ನಿಂದ ಚಾಕು ಇರಿತ

ದಕ್ಷಿಣ ಕನ್ನಡ: ಮಂಗಳೂರು ಹೊರವಲಯದ ಪರಂಗಿಪೇಟೆಯ ಕುಮ್ಡೇಲು ಎಂಬಲ್ಲಿ ರೌಡಿ ಶೀಟರ್ ಪವನ್ ಎಂಬಾತನಿಗೆ ರೌಡಿಶೀಟರ್ ಚರಣ್ ಎಂಬಾತ ಚೂರಿ ಇರಿದೊದ್ದನೆ. ಎಸ್‌ಡಿಪಿಐ ಮುಖಂಡ ಕಲಾಯಿ ಅಶ್ರಫ್ ಕೊಲೆ ಪ್ರಕರಣದ ಆರೋಪಿಯಾಗಿರುವ ಪವನ್‌ಗೆ ಗಾಂಜಾ ವ್ಯಸನಿಯಾಗಿರುವ ಆರೋಪಿ ಚರಣ್ ಚಾಕು ಇರಿದಿದ್ದಾನೆ. ಕೂಡಲೇ ಪವನ್‌ನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಚಿಕಿತ್ಸೆಯ ಬಳಿಕ ಪ್ರಾಣಾಪಾಯದಿಂದ ಗಾಯಾಳು ಪವನ್ ಪಾರಾಗಿದ್ದಾನೆ. ಮೇಲ್ನೋಟಕ್ಕೆ ಘಟನೆಗೆ ವೈಯಕ್ತಿಕ ದ್ವೇಷವೇ ಕಾರಣ ಎಂದು ಪೊಲೀಸರು ಸ್ಪಷ್ಟನೆ ನೀಡಿದ್ದಾರೆ. ಈ ಕುರಿತು ಬಂಟ್ವಾಳ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.

ಶಾಸಕ ಮತ್ತಿಮಡುಗೆ ಮಾತೃವಿಯೋಗ

ಕಲಬುರಗಿ: ಇಲ್ಲಿನ ಗ್ರಾಮೀಣ ಮತಕ್ಷೇತ್ರದ ಶಾಸಕ ಬಸವರಾಜ ಮತ್ತಿಮಡು ಅವರ ತಾಯಿ ಗೌರಮ್ಮ

ಬಿ.ಮತ್ತಿಮಡು (80) ಶುಕ್ರವಾರ ಬೆಳಗ್ಗೆ ಹೃದಯಾಘಾತದಿಂದ ನಿಧನರಾದರು. ಅವರಿಗೆ ಶಾಸಕ ಬಸವರಾಜ ಮತ್ತಿಮಡು, ಉದ್ದಿಮೆದಾರ ಗುರುರಾಜ ಮತ್ತಿಮಡು, ಸಾಯಿಬಣ್ಣ ಮತ್ತಿಮಡು ಸೇರಿ ಮೂವರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ. ಸ್ವಗ್ರಾಮ ಕಲಬುರಗಿ ಜಿಲ್ಲೆ ಕಾಳಗಿ ತಾಲೂಕಿನ ಮತ್ತಿಮಡು ಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಶಾಸಕರ ಆಪ್ತ ಸಹ ದತ್ತಾತ್ರೇಯ ಪವಾರ ತಿಳಿಸಿದ್ದಾರೆ.

11 ಜಿಲ್ಲೆಗಳಲ್ಲಿ ನಾಲ್ಕು ದಿನ ಮಳೆ

ಬೆಂಗಳೂರು: ರಾಜ್ಯದ 11ಕ್ಕೂ ಅಧಿಕ ಜಿಲ್ಲೆಗಳಲ್ಲಿ ಏ. 27 ರಿಂದ 4 ದಿನಗಳ ಕಾಲ ಭರ್ಜರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬಾಗಲಕೋಟೆ, ಗದಗ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ, ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ, ಕೊಡಗು, ಮಂಡ್ಯ, ತುಮಕೂರು, ಮೈಸೂರು, ಹಾಸನದಲ್ಲಿ ಮಳೆಯಾಗಲಿದ್ದು, ಯೆಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ. ಬೆಳ ಗಾವಿ, ಚಿಕ್ಕಮಗಳೂರು ಹಾಗೂ ಕೊಡಗು ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದೆ. ರಾಜ್ಯದ ಉಳಿದ ಜಿಲ್ಲೆ ಗಳಲ್ಲಿ ಮುಂದಿನ 7 ದಿನ ಯಾವುದೇ ಮಳೆಯಾಗುವುದಿಲ್ಲ ಎಂದು ಇಲಾಖೆ ಮೂಲಗಳು ತಿಳಿಸಿವೆ.

ಇವಿಎಂಗಳಿಗೆ ಸುಪ್ರೀಂ ಮುದ್ರೆ

← ಮೊದಲಪುಟದಿಂದ

ಹಾಗೆಯೇ, ಇವಿಎಂ ಮತ್ತು ವಿವಿಪ್ಯಾಟ್‌ಗಳಲ್ಲಿನ ಅಳಿಸಿದ ಸೆಮಿಕಂಟ್ರೋಲರ್‌ಗಳನ್ನು ಫಲಿತಾಂಶ ಪ್ರಕಟವಾದ ಏಳು ದಿನಗಳ ಒಳಗೆ ಲಿಖಿತ ಕೋರಿಕೆಯ ಮೇರೆಗೆ ಉತ್ಪಾದನಾ ಕಂಪನಿಗಳು ಎಂಜಿನಿಯರ್‌ಗಳು ಪರಿಶೀಲಿಸಬೇಕು ಎಂದು ಸುಪ್ರೀಂಕೋರ್ಟ್ ತಿಳಿಸಿದೆ. ಒಂದು ವೇಳೆ ಇದಕ್ಕೆ ವಿನಂತಿ ಮಾಡುವ ಅಭ್ಯರ್ಥಿಗಳು ಪರಿಶೀಲನೆಯ ವೆಚ್ಚವನ್ನು ಭರಿಸಬೇಕು. ಇಲ್ಲಿ ಇವಿಎಂ ತಿರುಚಿದ್ದು ಕಂಡು ಬಂದರೆ ವೆಚ್ಚವನ್ನು ಮರುಪಾವತಿಸಬೇಕು ಎಂದು ಹೇಳಿದೆ.

ನೇಹಾ ಹಿರೇಮಠ ನಿವಾಸಕ್ಕೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಭೇಟಿ, ಸಾಂತ್ವನ

ನೇಹಾ ಕೊಲೆ ಪ್ರಕರಣ ಸಿಬಿಐಗೆ ಹಸ್ತಾಂತರಿಸಿ

ಹುಬ್ಬಳ್ಳಿ: ರಾಜ್ಯ ಸರಕಾರ ನೇಹಾ ಕೊಲೆ ಪ್ರಕರಣದ ತನಿಖೆಯನ್ನು ಕೂಡಲೇ ಸಿಬಿಐಗೆ ಹಸ್ತಾಂತರಿಸಬೇಕು ಎಂದು ಶಾಸಕ ಬಸವರಾಜ ಬೊಮ್ಮಾಯಿ ಆಗ್ರಹಿಸಿದರು.

ಶುಕ್ರವಾರ ನೇಹಾ ನಿವಾಸಕ್ಕೆ ತೆರಳಿ, ಕುಟುಂಬದವರಿಗೆ ಸಾಂತ್ವನ ಹೇಳಿದ ನಂತರ ಅವರು ಮಾಧ್ಯಮದವರೊಂದಿಗೆ ಮಾತನಾಡಿ, ನೇಹಾ ಹತ್ಯೆ ಪ್ರಕರಣದ ತನಿಖೆ ದಾರಿತಪ್ಪಿದೆ. ರಾಜ್ಯ ಸರಕಾರಕ್ಕೆ ಯಾರನ್ನೂ ರಕ್ಷಣೆ ಮಾಡುವ ಉದ್ದೇಶವಿಲ್ಲದಿದ್ದರೆ, ಪ್ರಕರಣ ತನಿಖೆಯನ್ನು ಸಿಬಿಐಗೆ ವಹಿಸಲಿ ಎಂದರು.

ಈ ಪ್ರಕರಣದಲ್ಲಿ ಬಿಜೆಪಿ ರಾಜಕಾರಣ ಮಾಡುತ್ತಿದೆ ಎನ್ನುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಬೊಮ್ಮಾಯಿ,

> **ನೇಹಾ ಕೊಲೆಯ ಹಿಂದೆ ಇನ್ನಷ್ಟು ಜನ ಇದ್ದಾರೆ, ಸಮಗ್ರ ತನಿಖೆಯಾಗಬೇಕಾದರೆ ಸಿಬಿಐಗೆ ಕೊಡಬೇಕು ಎನ್ನುವುದು ಕುಟುಂಬಸ್ಥರ ಆಗ್ರಹ. ಆದರೆ, ರಾಜ್ಯ ಸರಕಾರ ಸಿಐಡಿಗೆ ಕೊಟ್ಟು ಕೈ ತೊಳೆದುಕೊಳ್ಳುವ ಕೆಲಸ ಮಾಡಿದೆ.**
> **-ಬಸವರಾಜ ಬೊಮ್ಮಾಯಿ** ಮಾಜಿ ಸಿಎಂ



ಕೊಲೆಯಾದ ನೇಹಾ ನಿವಾಸಕ್ಕೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಶುಕ್ರವಾರ ಭೇಟಿ ನೀಡಿ, ನಿರಂಜನ್ ಅವರಿಗೆ ಸಾಂತ್ವನ ಹೇಳಿದರು.

ಕಾಲೇಜು ಆವರಣದಲ್ಲಿ ಕೊಲೆ ನಡೆದಾಗ ವಿರೋಧ ಪಕ್ಷ ಸುಮ್ಮನೆ ಕುಳಿತುಕೊಳ್ಳಬೇಕು ಎಂದು ಮುಖ್ಯಮಂತ್ರಿ ನಿರೀಕ್ಷೆ ಮಾಡಿದ್ದರಾ? ಅವರು ವಿರೋಧ ಪಕ್ಷದಲ್ಲಿದ್ದಿದ್ದರೆ ಸುಮ್ಮನೆ ಕೂತಿರುತ್ತಿದ್ದರಾ? ಇಡೀ ಕರ್ನಾಟಕದ ಜನತೆ ಆಕ್ರೋಶ ವ್ಯಕ್ತಪಡಿಸುತ್ತಿವೆ. ಮಠಾಧೀಶರು ಸಂಘ-ಸಂಸ್ಥೆಗಳು, ವಿದ್ಯಾರ್ಥಿಗಳು ಪ್ರತಿಭಟನೆಯನ್ನು ಮಾಡುತ್ತಿದ್ದಾರೆ. ಅವರೆಲ್ಲರೂ ರಾಜಕೀಯ ಮಾಡುತ್ತಿದ್ದಾರಾ? ಈ ಪ್ರಕರಣಕ್ಕೆ ರಾಜಕೀಯ ಲೇಪ ಬಂದಿರುವುದೇ ಕಾಂಗ್ರೆಸ್‌ನವರ ಮಾತುಗಳಿಂದ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನೇಹಾ ಕೊಲೆ ಪ್ರಕರಣದಲ್ಲಿ ಪೊಲೀಸರು ಆರೋಪಿಯನ್ನು ಬಂಧಿಸಿ, ವಿಚಾರಣೆಗೆ ತಮ್ಮ ವಶಕ್ಕೆ ಪಡೆಯದೆ, ನ್ಯಾಯಾಂಗ ಬಂಧನಕ್ಕ ಒಪ್ಪಿಸಿರುವುದು ಯಾಕೆ? ಇದರಿಂದಲೇ ತಿಳಿಯುತ್ತದೆ ಪ್ರಕರಣ ದಾರಿ ತಪ್ಪಿದೆ ಎಂದು. ಇದರ ಹಿಂದೆ ಯಾರ್ಯಾರು ಇದ್ದಾರೆ ಎಂದು ನೇಹಾ ತಂದೆ ಪೊಲೀಸರಿಗೆ ಮಾಹಿತಿ ನೀಡಿದ್ದರೂ ಅವರನ್ನು ಬಂಧಿಸಿ ವಿಚಾರಣೆ ನಡೆಸಿಲ್ಲ. ಅನೇಕರು ಫೋನ್‌ನಲ್ಲಿ ಮಾತನಾಡಿದ್ದಾರೆ. ಅದೆಲ್ಲವೂ ತನಿಖೆಯಾಗಬೇಕು ಎಂದು ಆಗ್ರಹಿಸಿದರು.

ನಿರಂಜನ್‌ಗೆ ಪೊಲೀಸ್ ಭದ್ರತೆ

ಹುಬ್ಬಳ್ಳಿ: ನೇಹಾ ಕೊಲೆ ಪ್ರಕರಣಕ್ಕೆ ಸಂಬಂಧಿಸಿ, ಮೃತಳ ತಂದೆ ನಿರಂಜನಯ್ಯ ಹಿರೇಮಠ ಅವರಿಗೆ ಪೊಲೀಸ್ ಭದ್ರತೆ ನೀಡಲಾಗಿದೆ.

ಮಗಳ ಕೊಲೆ ಪ್ರಕಣಕ್ಕೆ ಸಂಬಂಧಿಸಿ ತನಗೆ ಕೆಲವರಿಂದ ಜೀವ ಬೆದರಿಕೆಯಿದೆ ಎಂದು ನಿರಂಜನಯ್ಯ ಗುರುವಾರ ಹೇಳಿದ್ದರು. ಅಲ್ಲದೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಲ್ಲಿಯೂ ಬೆದರಿಕೆ ಕುರಿತು ಪ್ರಸ್ತಾವಿಸಿದ್ದರು. ಈ ಹಿನ್ನೆಲೆಯಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಘಟಕ ಮುಂಜಾಗ್ರತಾ ಕ್ರಮವಾಗಿ ಶುಕ್ರವಾರ ಅವರಿಗೆ ಶಸ್ತ್ರಸಜ್ಜಿತ ಒಬ್ಬ ಅಂಗರಕ್ಷಕರನ್ನು ಭದ್ರತೆಗೆ ನಿಯೋಜಿಸಿದೆ.

ಸಾಂತ್ವನ ಹೇಳುವ ನೆಪದಲ್ಲಿ ಕೆಲವು ಅನುಮಾನಾಸ್ಪದ ವ್ಯಕ್ತಿಗಳು ಮನೆಗೆ ಬಂದಿದ್ದರು. ಮಗಳು ಮಲಗುವ ಬೆಡ್‌ರೂಮ್ ವಿಡಿಯೊ ಸಹ ಮಾಡಿಕೊಂಡಿದ್ದಾರೆ. ಇದನ್ನೆಲ್ಲ ಗಮನಿಸಿದರೆ ಕುಟುಂಬದವರ ಜೀವಕ್ಕೂ ಅಪಾಯದ ಲಕ್ಷಣವಿದೆ. ಈ ಕುರಿತು ತನಿಖೆಯಾಗಬೇಕು ಎಂದು ನಿರಂಜನಯ್ಯ ಆಗ್ರಹಿಸಿದ್ದರು. ಬಿಡ್ನಾಳದಲ್ಲಿ ಇರುವ ಅವರ ನಿವಾಸಕ್ಕೂ ಇಬ್ಬರು ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗೆ ನಿಯೋಜಿಸಲಾಗಿದೆ. ಈ ಕುರಿತು ಪ್ರತಿಕ್ರಿಯಿಸಿದ ಪೊಲೀಸ್ ಕಮಿಷನರ್ ರೇಣುಕಾ ಸುಕುಮಾರ್ ನಿರಂಜನಯ್ಯ ಅವರು ತಮ್ಮ ಜೀವಕ್ಕೆ ಬೆದರಿಕೆಯಿದೆ ಎಂದು ಹೇಳಿದ್ದರು. ಈ ಹಿನ್ನೆಲೆಯಲ್ಲಿ ಅವರಿಗೆ ಹಾಗೂ ಅವರ ನಿವಾಸಕ್ಕೆ ಭದ್ರತಾ ಸಿಬ್ಬಂದಿ ನಿಯೋಜಿಸಲಾಗಿದೆ ಎಂದರು.

ಸದ್ಯದಲ್ಲೇ ಪ್ರಧಾನಿ ಮೋದಿ ಕಣ್ಣೀರು

← ಮೊದಲಪುಟದಿಂದ

ಇಲ್ಲದ ವಿಚಾರಗಳನ್ನು ಮಾತನಾಡುತ್ತಾರೆ. ದೇಶದಲ್ಲಿ ಬಡತನ ನಿರುದ್ಯೋಗ, ಬೆಲೆ ಏರಿಕೆ ಸವಾಲುಗಳಿವೆ. ಇದೆಲ್ಲದಕ್ಕೂ ಕಾಂಗ್ರೆಸ್ ಪರಿಹಾರ ನೀಡಲಿದೆ ಎಂದು ರಾಹುಲ್ ಹೇಳಿದರು. ಮೋದಿ 10 ವರ್ಷದಲ್ಲಿ ಬಡವರ ಹಣ ಕಿತ್ತುಕೊಂಡು ಕೆಲವ ರನ್ನು ಮಾತ್ರ ಶ್ರೀಮಂತ ಮಾಡಿದ್ದಾರೆ. ಬಡವರು, ಅಲ್ಪಸಂಖ್ಯಾ ತರು, ಹಿಂದುಳಿದವರಿಗೆ, ದಲಿತರಿಗೆ, ಆದಿವಾಸಿಗಳಿಗೆ ಜಾಗ ವಿಲ್ಲ. ಮೋದಿಯವರು ಶ್ರೀಮಂತರಿಗೆ ನೀಡಿರುವ ಅಷ್ಟು ಹಣ ನಾವು ಬಡವರಿಗೆ ನೀಡುತ್ತೇವೆ ಎಂದರು. ಹಾಗೆಯೇ, ಕಾಂಗ್ರೆಸ್ ಕಾರ್ಯಕರ್ತರು ಹುಲಿ ಹಾಗೂ ಸಿಂಹದಂತೆ ಇದ್ದೀರಿ. ಎಲ್ಲರೂ ಬಡವರ, ದೀನದಲಿತರ, ದುರ್ಬಲ ಸೇವೆ ಮಾಡುತ್ತಿದ್ದೀರಿ ಎಂದು ಅವರನ್ನು ಹುರಿದುಂಬಿಸಿದರು. ಕರ್ನಾಟಕದಲ್ಲಿ ನಾವು ಪಂಚ ಗ್ಯಾರಂಟಿಗಳನ್ನು ಕೊಟ್ಟಿದ್ದೇವೆ. ಅದರಿಂದ ಬಡವರಿಗೆ ಸಾಕಷ್ಟು ಅನುಕೂಲವಾಗಿದೆ. ಬಿಜೆಪಿಯ ವರು 25 ಜನರ ಕೋಟ್ಯಾಧೀಶರನ್ನು ಹುಟ್ಟು ಹಾಕಿದೆ. ನಮ್ಮ ಸರ್ಕಾರ ಕೋಟಿ ಕೋಟಿ ಲಕ್ಷಾಧೀಶರರನ್ನು ಮಾಡಲು ಹೊರಟಿದೆ. ನರೇಂದ್ರ ಮೋದಿ ಎಷ್ಟು ಹಣವನ್ನು ಶ್ರೀಮಂತರಿಗೆ, ಅರಬ್ ಪತಿಗಳಿಗೆ ನೀಡಿದ್ದಾರೆ, ನಾವು ಅಷ್ಟನ್ನು ಬಡವರಿಗೆ, ರೈತರಿಗೆ, ಯುವಕರಿಗೆ ನೀಡುತ್ತೇವೆ. ಗ್ಯಾರಂಟಿ ಯೋಜನೆಗಳಿಂದ ಕರ್ನಾಟಕ ಆರ್ಥಿಕ ದಿವಾಳಿಯಾ ಗುತ್ತದೆ ಎಂದು ಮೋದಿ ಹೇಳಿದ್ದರು. ಆದರೆ ಆಗಿಲ್ಲ, ಇದನ್ನು ಮೋದಿಯವರು ತಿಳಿದುಕೊಳ್ಳಬೇಕು. ಕರ್ನಾಟಕದ 1 ಕೋಟಿ ಮಹಿಳೆಯರಿಗೆ ವರ್ಷಕ್ಕೆ 24 ಸಾವಿರ ಸಿಗುತ್ತಿದೆ. ಇದರ ಜತೆಗೆ ನಾವು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಒಂದು ಲಕ್ಷ ರು. ನೀಡುತ್ತೇವೆ ಎಂದರು.

ಸಾಲಮನ್ನಾ ಗ್ಯಾರಂಟಿ: ಪ್ರಧಾನಿ ಮೋದಿ ರೈತರ ಸಾಲ ಮನ್ನಾ ಮಾಡಿಲ್ಲ, ರೈತರ ಬೆಳೆಗಳಿಗೆ ಎಂಎಸ್ಪಿ ದರ ನೀಡಿಲ್ಲ, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ರೈತರ ಸಾಲ ಮನ್ನಾ ಮಾಡುತ್ತೇವೆ. ಬೆಳೆಗಳಿಗೆ ಎಂಎಸ್ಪಿ ದರ ನಿಗದಿ ಮಾಡುತ್ತೇವೆ. ಆಶಾ ಅಂಗನವಾಡಿ ಕಾರ್ಯಕರ್ತೆಯರಿಗೆ ಎರಡು ಪಟ್ಟು ಸಂಬಳ ಹಾಗೂ ನರೇಗಾದಲ್ಲಿ ನಿತ್ಯ 400 ರು. ಸಂಬಳ ನೀಡುತ್ತೇವೆ. ಅಗ್ನಿಪಥ ಯೋಜನೆ ರದ್ದು ಮಾಡಿ ಎಲ್ಲ ಯೋಧರಿಗೆ ಒಂದೇ ರೀತಿಯ ವೇತನ ಕಲ್ಪಿಸುತ್ತೇವೆ ಎಂದರು.

ನೋಟಾ ಗೆದ್ದರೆ ಮರು ಮತದಾನ?

← ಮೊದಲಪುಟದಿಂದ

ಅಲ್ಲದೆ, ಈ ಸಂದರ್ಭದಲ್ಲಿ ಸೂರತ್ ಕ್ಷೇತ್ರದಲ್ಲಿನ ಬಿಜೆಪಿ ಅಭ್ಯರ್ಥಿಯ ಅವಿರೋಧ ಆಯ್ಕೆ ಬಗ್ಗೆಯೂ ಪ್ರಸ್ತಾಪವಾಯಿತು. ಇಲ್ಲಿ ಬೇರೆ ಪಕ್ಷಗಳ ಅಭ್ಯರ್ಥಿ ಇಲ್ಲದ ಕಾರಣ, ಬಿಜೆಪಿಯ ಅಭ್ಯರ್ಥಿ ಗೆದ್ದಿದ್ದಾರೆ ಎಂದು ಘೋಷಿಸಲಾಯಿತು ಎಂದರು. ಅಲ್ಲದೆ, ಯಾವುದೇ ಚುನಾವಣೆಯಲ್ಲಿ ನೋಟಾ ವಿಜೇತರಾಗಿ ಹೊರಹೊಮ್ಮಿದರೆ, ಕಡ್ಡಾಯ ಮರು ಮತದಾನ ನಡೆಯಲಿದೆ ಎಂದು ಆಯಾ ರಾಜ್ಯ ಚುನಾವಣಾ ಆಯೋಗ (ಎಸ್‌ಇಸಿ) ಘೋಷಿಸಿದೆ. ಹೀಗಾಗಿ, ನೋಟಾ ಜಾರಿಯಾದ ಬಳಿಕ ಚುನಾವಣಾ ವ್ಯವಸ್ಥೆಯಲ್ಲಿ ಆಗಿರುವ ಮಹತ್ವದ ಬದಲಾವಣೆ ಇದಾಗಿದೆ ಎಂದು ಹೇಳಿದರು. ಆದಾಗ್ಯೂ, ನೋಟಾವನ್ನು ಕಾಲ್ಪನಿಕ ಅಭ್ಯರ್ಥಿ ಎಂದು ಪರಿಗಣಿಸಲಾಗಿದೆ. ಒಂದು ವೇಳೆ ನೋಟಾಗೆ ಹೆಚ್ಚು ಮತ ಬಿದ್ದು, ಎರಡನೇ ಸ್ಥಾನದಲ್ಲಿರುವ ಅಭ್ಯರ್ಥಿಯನ್ನು ವಿಜಯೀ ಎಂದು ಘೋಷಿಸಲಾಗುತ್ತದೆ ಎಂದೂ ಎಸ್‌ಇಸಿಗಳು ಹೇಳಿವೆ. ಇದು ನೋಟಾದ ತತ್ವಕ್ಕೆ ವಿರೋಧ ಎಂದು ಅರ್ಜಿದಾರರು ವಾದಿಸಿದ್ದಾರೆ.

5 ವರ್ಷ ನಿಷೇಧಿಸಬೇಕು: ನೋಟಾಕ್ಕಿಂತ ಕಡಿಮೆ ಮತಗಳನ್ನು ಪಡೆಯುವ ಅಭ್ಯರ್ಥಿಗಳು ಐದು ವರ್ಷ ಗಳ ಅವಧಿಗೆ ಎಲ್ಲಾ ಚುನಾವಣೆಗಳಲ್ಲಿ ಸ್ಪರ್ಧಿಸುವುದನ್ನು ನಿಷೇಧಿಸಬೇಕು. ನೋಟಾವನ್ನು ಕಾಲ್ಪನಿಕ ಅಭ್ಯರ್ಥಿ ಎಂದು ಸರಿಯಾದ ಮತ್ತು ಪರಿಣಾಮ ಕಾರಿ ಪ್ರಚಾರವನ್ನು ಖಚಿತಪಡಿಸಿಕೊಳ್ಳಲು ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಬೇಕು ಎಂದು ಅರ್ಜಿದಾರರು ಕೋರ್ಟ್‌ಗೆ ಮನವಿ ಸಲ್ಲಿಸಿದ್ದಾರೆ.

ಅಧ್ಯಾತ್ಮ ಗುರು, ಅಂತಾರಾಷ್ಟ್ರೀಯ ವಾಸ್ತು ತಜ್ಞ ಚಂದ್ರಶೇಖರ ಸ್ವಾಮೀಜಿ, ರಜನಿ ಭಟ್, ರಾಹುಲ್ ಭಟ್ ಮತ್ತು ಪೂಜಾ ಅವರು ಬೆಂಗಳೂರಿನ ಆರ್.ಟಿ.ನಗರದ ಫ್ಲೋರೆನ್ಸ್ ಸ್ಕೂಲ್‌ನ ಮತಗಟ್ಟೆಯಲ್ಲಿ ಮತ ಚಲಾಯಿಸಿದರು.

ಬೋರಿಂಗ್ ಬೆಂಗಳೂರು

← ಮೊದಲಪುಟದಿಂದ

ಈ ಭಾಗದಲ್ಲಿ ಇಂಡಿಗನತ್ತ, ತೇಕಣೆ, ಮೆಂದಾರೆ ಹಾಗೂ ತುಳಸಿಕೆರೆ ಗ್ರಾಮಗಳಲ್ಲಿ ಮತದಾನ ಬಹಿಷ್ಕಾರ ಮಾಡಲಾಗಿತ್ತು. ಪಡಸಲನತ್ತ ಗ್ರಾಮದಲ್ಲಿ 85 ಮತದಾರರ ಪೈಕಿ ಕೇವಲ ಇಬ್ಬರು ಮತದಾನ ಮಾಡಿದ್ದಾರೆ. ಕೋಲಾರ ಲೋಕಸಭಾ ಕ್ಷೇತ್ರದ ಕೋಲಾರ ತಾಲೂಕು ಬೆಗ್ಲಿ ಬೆಣಜೇನಹಳ್ಳಿ ಗ್ರಾಮದ ಜನರು ಎಂಎಸ್‌ಐಎಲ್ ಮದ್ಯದಂಗಡಿ ಮುಚ್ಚುವಂತೆ ಆಗ್ರಹಿಸಿ, ಮಾಲೂರು ತಾಲೂಕಿನ ತೊರ್ನಳ್ಳಿ ಗ್ರಾಮಸ್ಥರು ಊರಿನ ಕೆರೆಗೆ ಕೆ.ಸಿ.ವ್ಯಾಲಿ ನೀರು ಹರಿಸುವಂತೆ ಒತ್ತಾಯಿಸಿ, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಾಗೇಪಲ್ಲಿ ತಾಲೂಕು ಗೂಳೂರು ಹೋಬಳಿ ದೇವಿಕುಂಟೆ ಗ್ರಾಮಸ್ಥರು ಸೂಕ್ತ ರಸ್ತೆ ನಿರ್ಮಾಣಕ್ಕೆ ಆಗ್ರಹಿಸಿ ಮತದಾನ ಬಹಿಷ್ಕರಿಸಿದ್ದರು.

ಗಣಿ ಬಾಧಿತ ಪ್ರದೇಶದಿಂದ ತಮ್ಮ ಗ್ರಾಮವನ್ನು ಹೊರಗಿಟ್ಟಿರುವುದನ್ನು ಖಂಡಿಸಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಯರೆಹಳ್ಳಿ ಮತ್ತು ಸಿದ್ದಾಪುರ ಗ್ರಾಮಸ್ಥರು ಮತದಾನ ಬಹಿಷ್ಕರಿಸಿದ್ದರು. ಅಧಿಕಾರಿಗಳು ಮನವೊಲಿಸಲು ಪ್ರಯತ್ನಿಸಿದರೂ ಸಾಧ್ಯವಾಗಲಿಲ್ಲ. ಕೊನೆಗೆ ತರಳಬಾಳು ಮಠದ ಡಾ.ಶಿವಮೂರ್ತಿ ಶಿವಾಚಾರ್ಯ ಶ್ರೀಗಳು ಭೇಟಿ ನೀಡಿ ಮನವೊಲಿಸಿದ ಬಳಿಕ ಮತದಾನ ಮಾಡಿದ್ದು, ರಾತ್ರಿವರೆಗೆ ಮತದಾನ ಪ್ರಕ್ರಿಯೆ ಮುಂದುವರಿದಿತ್ತು.

ಮೂವರ ಸಾವು

ಮೊದಲ ಹಂತದ ಮತದಾನದ ವೇಳೆ ಮತದಾನ ಮಾಡಿದ ಬಳಿಕ ಮೂವರು ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ತುಮಕೂರು ನಗರದ ಎಸ್.ಎಸ್.ಪುರಂನಲ್ಲಿ ಮತ ಚಲಾಯಿಸಿ ಮನೆಗೆ ಬಂದಿದ್ದ ರಮೇಶ್ (54) ಎಂಬುವವರಿಗೆ ಹೃದಯಾಘಾತವಾಗಿ ಮೃತಪಟ್ಟಿದ್ದಾರೆ. ಕೊಡಗು-ಮೈಸೂರು ಕ್ಷೇತ್ರದ ವೀರಾಜಪೇಟೆ ತಾಲೂಕಿನ ಬಿ.ಶೆಟ್ಟಿಗೇರಿ ಗ್ರಾಮದ ಮತಗಟ್ಟೆ ಸಮೀಪ ಮತ ಹಾಕಲು ಸರತಿ ಸಾಲಿನಲ್ಲಿ ನಿಂತಿದ್ದ ಪದಾರ್ಥಿ ಮನೋಹರ (58) ಎಂಬುವವರು ಸಾವಿಗೀಡಾಗಿದ್ದಾರೆ. ಅದೇ ಕ್ಷೇತ್ರದ ಹುಣಸೂರು ತಾಲೂಕಿನ ತಿಪ್ಪೂರು ಗ್ರಾಮದ ವೃದ್ಧೆ ಪುಟ್ಟಮ್ಮ (90) ಎಂಬುವವರು ಮತ ಹಾಕಿ ಖುಷಿಯಲ್ಲಿ ವಾಪಸಾಗುತ್ತಿದ್ದಾಗ ದಿಡೀರ್ ಕುಸಿದುಬಿದ್ದ ಮೃತಪಟ್ಟಿದ್ದಾರೆ. ಬೆಂಗಳೂರಿನ ಜೆ.ಪಿ.ನಗರದ 8ನೇ ಹಂತದ ಜಂಬೂ ಸವಾರಿ ದಿನ್ನೆಯಲ್ಲಿ ಮತದಾನಕ್ಕೆ ಬಂದಿದ್ದ ಮಹಿಳೆ ಹೃದಯ ಸ್ಥಂಭನಕ್ಕೊಳಗಾಗಿ ಕುಸಿದು ಬಿದ್ದುದ್ದು, ಅದೇ ವೇಳೆ ಮತದಾನಕ್ಕಾಗಿ ಮತಗಟ್ಟೆಗೆ ಬಂದಿದ್ದ ವೈದ್ಯ ಗಣೇಶ್ ಶ್ರೀನಿವಾಸ ಪ್ರಸಾದ್ ಎಂಬುವರು ಆಕೆಗೆ ಪ್ರಾಥಮಿಕ ಚಿಕಿತ್ಸೆ ನೀಡಿ ಆ್ಯಂಬುಲೆನ್ಸ್‌ನಲ್ಲಿ ಆಸ್ಪತ್ರೆಗೆ ರವಾನಿಸಿದ್ದಾರೆ. ಮಹಿಳೆ ಚೇತರಿಸಿಕೊಳ್ಳುತ್ತಿದ್ದಾರೆ.

ಸುಧಾಕರ್ ವಿರುದ್ಧ ಕೇಸ್ 4.8 ಕೋಟಿ ರು. ಜಪ್ತಿ

← ಮೊದಲಪುಟದಿಂದ

ಅಲ್ಲದೆ, ಎಂಸಿಸಿ ನೋಡಲ್ ಅಧಿಕಾರಿ ಮುನೀಶ್ ಮೌದ್ಗಿಲ್ ಅವರಿಗೆ ಬಂದಿರುವ ವಾಟ್ಸಾಪ್ ಕರೆ, ಸಂದೇಶಗಳ ಸ್ಕ್ರೀನ್‌ಶಾಟ್‌ಗಳೊಂದಿಗೆ ಡಾ.ಸುಧಾಕರ್ ವಿರುದ್ಧ ಎಫ್‌ಐಆರ್ ದಾಖಲಿಸಿ, ಹಣ ವಶಕ್ಕೆ ಪಡೆಯಲಾಗಿದೆ.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಿಚಕ್ಷಣ ದಳದ (ಎಫ್‌ಎಸ್‌ಟಿ) ಅಧಿಕಾರಿಗಳು 4.8 ಕೋಟಿ ನಗದು ವಶಪಡಿಸಿಕೊಂಡಿದ್ದರು. ಈ ಸಂಬಂಧ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕೆ. ಸುಧಾಕರ್ ವಿರುದ್ಧ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಚುನಾವಣಾ ಆಯೋಗದ ಅಧಿಕಾರಿಗಳು ತಿಳಿಸಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಚಿಕ್ಕಬಳ್ಳಾಪುರದ ಫ್ಲೈಯಿಂಗ್ ಸ್ಕ್ವಾಡ್ ತಂಡ ದಾಳಿ ನಡೆಸಿದ್ದು, ಮತದಾನದ ಹಿಂದಿನ ದಿನ ಮತದಾರರಿಗೆ ಹಂಚಲು ಸಂಗ್ರಹಿಸಿದ್ದ ಹಣವನ್ನು ಚುನಾವಣಾಧಿಕಾರಿಗಳ ತಂಡ ವಶಕ್ಕೆ ಪಡೆದಿತ್ತು. ಈ ಬಗ್ಗೆ ಮುಖ್ಯ ಚುನಾವಣಾಧಿಕಾರಿಗಳು ಮಾಹಿತಿ ನೀಡಿ, ಡಾ.ಕೆ. ಸುಧಾಕರ್ ವಿರುದ್ಧ ಜನಪ್ರತಿನಿಧಿಗಳ ಕಾಯಿದೆಯ ಸೆಕ್ಷನ್ 123 ಹಾಗೂ ಐಪಿಸಿ ಸೆಕ್ಷನ್ 171 (ಬಿ, ಸಿ, ಇ, ಎಫ್) ಅಡಿ ಲಂಚ ಹಾಗೂ ಮತದಾರರಿಗೆ ಆಮಿಷವೊಡ್ಡಿದ ಕಾಯಿದೆಗಳಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದಿದ್ದಾರೆ.

ಈ ಮಧ್ಯೆ ಎಕ್ಸ್ ಸಾಮಾಜಿಕ ತಾಣದಲ್ಲಿ ಧರ್ಮದ ಆಧಾರದಲ್ಲಿ ಮತಯಾಚನೆ ಮಾಡಿದ ಆರೋಪದಲ್ಲಿ ಬೆಂಗಳೂರು ದಕ್ಷಿಣ ಕ್ಷೇತ್ರದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಮತ್ತು ಸಮುದಾಯಗಳ ಬಗ್ಗೆ ದ್ವೇಷ ಮೂಡಿಸುವ ಪೋಸ್ಟ್ ಹಾಕಿದ ಆರೋಪದ ಮೇಲೆ ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ವಿರುದ್ಧವೂ ಪ್ರಕರಣ ದಾಖಲಿಸಲಾಗಿದೆ ಎಂದು ಮುಖ್ಯ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯ ಸರಕಾರದಿಂದ ರೈತರ ಕಲ್ಯಾಣಕ್ಕೆ ಕೊಡುಗೆ ಇಲ್ಲ

ಸಾಲಮನ್ನಾ ಮಾಡಲು ಕೇಂದ್ರದ ಅನುದಾನ ಬೇಕಿಲ್ಲ

ಬೆಳಗಾವಿ: ಲೋಕಸಭಾ ಚುನಾವಣೆ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪ್ರಕಟಿಸಿದ 25 ಗ್ಯಾರಂಟಿಗಳಲ್ಲಿ ರೈತರ ಸಾಲ ಮನ್ನಾ ಕೂಡ ಸೇರಿಸಲಾಗಿದೆ. ನಿಮಗೆ ನಿಜವಾಗಿ



ರೈತರ ಬಗ್ಗೆ ಕಾಳಜಿ ಇದ್ದರೆ, ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರಕಾರ ಚುನಾವಣೆಗೆ ಮುನ್ನ ರೈತರ ಸಾಲ ಮನ್ನಾ ಮಾಡಬಹುದಿತ್ತು ಅಲ್ಲವೇ? ಎಂದು ಜೆಡಿಎಸ್ ರಾಷ್ಟ್ರೀಯ ಕೋರ್ ಸಮಿತಿ ಸದಸ್ಯ ಬಂಡೆಪ್ಪ ಕಾಶೆಂಪುರ ಟೀಕಿಸಿದರು.ಸುದ್ದಿಗಾರರೊಂದಿಗೆ ಮಾತನಾಡಿ, ಎಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ವೇಳೆ, ರೈತರ ಸಾಲ ಮನ್ನಾ ಮಾಡಿದ್ದರು. ರಾಜ್ಯ ಸರಕಾರವೂ ಕೇಂದ್ರದ ಅನುದಾನಕ್ಕಾಗಿ ಕಾಯಬೇಕಿಲ್ಲ. ಪಂಚ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿದ ಕಾಂಗ್ರೆಸ್‌ನವರು ರೈತರ ಕಲ್ಯಾಣಕ್ಕಾಗಿ ಏನು ಕೊಡುಗೆ ನೀಡಿದ್ದೀರಿ. ನಿಮ್ಮ ನಂಬಿ ಮತ ಹಾಕಿದ ಬಡವರು ಈಗ ಪರಿತಪಿಸುತ್ತಿದ್ದಾರೆ ಎಂದು ದೂರಿದರು. ಕಳೆದ ಒಂದು ವರ್ಷದಿಂದ ರಾಜ್ಯದಲ್ಲಿ ಅಭಿವೃದ್ಧಿ ಕೆಲಸ ಸ್ಥಗಿತಗೊಂಡಿವೆ. ಅಭಿವೃದ್ಧಿ ಕೆಲಸ ಕೈಗೊಳ್ಳಲು ಶಾಸಕರಿಗೂ ಅನುದಾನ ಸಿಗುತ್ತಿಲ್ಲ. ಗ್ಯಾರಂಟಿ ಯೋಜನೆಗಳ ಜಾರಿಗೆ ರಾಜ್ಯ ಸರಕಾರ ಮಾಡಿದ 1 ಲಕ್ಷ ಕೋಟಿ ರು.ಸಾಲದ ಹೊರೆ ಯಾರ ಮೇಲೆ ಹೊರಿಸಬೇಕು ಎಂದುಕೊಂಡಿದ್ದೀರಿ ಎಂದು ಪ್ರಶ್ನಿಸಿದರು. ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ಶಂಕರ ಮಾಡಲಗಿ, ಬಿಜೆಪಿ ಮಹಾನಗರ ಘಟಕದ ಅಧ್ಯಕ್ಷೆ ಗೀತಾ ಸುತಾರ, ಸಿ.ಎನ್.ನಾಗರಾಜ, ಎಫ್.ಎಸ್. ಸಿದ್ದನಗೌಡರ ಇತರರಿದ್ದರು.

ಕೆ.ಜಿ.ಬೀನ್ಸ್ ಬೆಲೆ 300 ರುಪಾಯಿಗೆ ಏರಿಕೆ

ಮಾರುಕಟ್ಟೆಯಲ್ಲಿ ಕುಸಿದ ಆವಕ | ಕೋಳಿ ಮಾಂಸಕ್ಕಿಂತ ಬೀನ್ಸ್ ಬಲು ದುಬಾರಿ

ಹೊಸಕೋಟೆ: ಮಾರುಕಟ್ಟೆಯಲ್ಲಿ ಆವಕ ಕುಸಿದ ಕಾರಣ ಈ ವಾರ ಬೀನ್ಸ್ ಬೆಲೆ ಏಕಾಏಕಿ ಏರಿಕೆಯಾಗಿದ್ದು ಕೆ.ಜಿ. ಬೀನ್ಸ್ ಬೆಲೆ 250 ರು.ಆಗಿದೆ.

ಕೋಳಿಮಾಂಸಕ್ಕಿಂತ ಬೀನ್ಸ್ ಬೆಲೆಯೇ ದುಬಾರಿಯಾಗಿದೆ. ಕೆ.ಜಿ ಕೋಳಿ ಮಾಂಸ 240 ರು.ಇದ್ದರೆ, ಬೀನ್ಸ್ 250ರಂತೆ ಮಾರಾಟವಾಗುತ್ತಿದೆ. ಕಳೆದ ವಾರ 130 ರಿಂದ 140 ಆಸುಪಾಸಿನಲ್ಲಿದ್ದ ಕೆ.ಜಿ ಬೀನ್ಸ್ ಈ ವಾರ ದಿಢೀರ್ ನೂರು ರುಪಾಯಿ ಏರಿಕೆಯಾಗಿದೆ. ಈ ಮೊದಲು ಕೆ.ಜಿ ಲೆಕ್ಕದಲ್ಲಿ ಬೀನ್ಸ್ ಖರೀದಿಸುತ್ತಿದ್ದ ಗ್ರಾಹಕರು ಈಗ ಗ್ರಾಂ ಲೆಕ್ಕಕ್ಕೆ ಇಳಿದಿದ್ದಾರೆ.

ಬೀನ್ಸ್ ಬಿಟ್ಟರೆ ಎರಡನೇ ಸ್ಥಾನದಲ್ಲಿರುವ ಗಜ್ಜರಿ ನೂರರ ಗಡಿ ಸಮೀಪಿಸಿದೆ. ಸೊಪ್ಪು, ಮೂಲಂಗಿ, ಬದನೆಕಾಯಿ, ಹಾಗಲಕಾಯಿ, ಬೀಟ್‌ರೂಟ್, ನವಿಲುಕೋಸು, ಬೆಂಡೆಕಾಯಿ, ಹೀರೇಕಾಯಿ, ಮೆಣಸಿನಕಾಯಿ, ಕ್ಯಾಪ್ಸಿಕಮ್, ನುಗ್ಗೇಕಾಯಿ ಸೇರಿದಂತೆ ಹೆಚ್ಚಿನ ತರಕಾರಿ ಬೆಲೆ 60 ರು. ಕ್ಕಿಂತ ಕೆಳಗೆ ಇಳಿಯುತ್ತಿಲ್ಲ.

ತೋಟಗಾರಿಕೆ ಬೆಳೆ, ಹೂವು, ಸೊಪ್ಪು ಮತ್ತು ತರಕಾರಿ ಬೆಳೆಯಲು ಹೆಸರುವಾಸಿಯಾದ ಬೆಂಗಳೂರು ಗ್ರಾಮಾಂತರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಬರ, ಬೇಸಿಗೆ ಹಾಗೂ ನೀರಿನ ಸಮಸ್ಯೆ ಎದುರಾಗಿದ್ದರಿಂದ ತರಕಾರಿ ಉತ್ಪಾದನೆ

ಕುಸಿದಿದೆ. ಈ ಎರಡು ಜಿಲ್ಲೆಗಳಿಂದ ಬೆಂಗಳೂರಿನ ಮಾರುಕಟ್ಟೆಗೆ ಬರುತ್ತಿರುವ ತರಕಾರಿ ಕಡಿಮೆಯಾಗಿದೆ. ಚುನಾವಣೆ ಮತ್ತು ಶುಭ ಕಾರ್ಯಗಳಿಂದಾಗಿ ಬೇಡಿಕೆ ಹೆಚ್ಚಿದ ಕಾರಣ ತರಕಾರಿ, ಸೊಪ್ಪಿನ ಧಾರಣೆ ಏರಿಕೆಯಾಗಿದೆ ಎನ್ನುತ್ತಾರೆ ಮಂಡಿ ವರ್ತಕರು.

ಬೇಸಿಗೆ ಹಾಗೂ ನೀರಿನ ಸಮಸ್ಯೆ ಹೀಗೆ ಮುಂದುವರೆದರೆ ಮುಂದಿನ ದಿನಗಳಲ್ಲಿ ತರಕಾರಿ ಮತ್ತಷ್ಟು ದುಬಾರಿಯಾಗುವ ಸಾಧ್ಯತೆ ಇದೆ. ಬೀನ್ಸ್ 300 ರು.ದಾಟುವ ನಿರೀಕ್ಷೆ ಇದೆ ಎನ್ನುತ್ತಾರೆ ಹೊಸಕೋಟೆಯ ತರಕಾರಿ ವ್ಯಾಪಾರಿ ವೆಂಕಟೇಶ್.

> **ಯುಗಾದಿ ಹಬ್ಬದ ಬೆನ್ನಲ್ಲೇ ಬಿನ್ಸ್‌ಗೆ ಬೇಡಿಕೆ ಹೆಚ್ಚಾಯಿತು. ಜತೆಗೆ ಮದುವೆ ಜಾತ್ರೆ ರಥೋತ್ಸವ ಸೇರಿದಂತೆ ವಿವಿಧ ರೀತಿಯ ಶುಭ ಸಮಾರಂಭ ನಡೆಯುತ್ತಿರುವುದರಿಂದ ಹಬ್ಬಕ್ಕೆ ಮುಂಚೆ ಕೆ.ಜಿ.ಗೆ 100 ರು. ಇದ್ದ ಬಿನ್ಸ್ ಬಳಿಕ ₹120 ₹140 ದಾಟ ಇದೀಗ ₹160ಕ್ಕೆ ಬಂದು ನಿಂತಿದೆ.**
> **-ಮೊಹಮ್ಮದ್ ಶಫಿ** ತರಕಾರಿ ವ್ಯಾಪಾರಿ ರಾಮನಗರ

> **ಬೀನ್ಸ್ ಬೆಳೆ ಹೆಚ್ಚು ನೀರು ಬಯಸುತ್ತದೆ. ಬಿರು ಬೇಸಿಗೆ ನೀರಿನ ಕೊರತೆಯಿಂದ ಬೀನ್ಸ್ ಬೆಳೆ ಒಣಗುತ್ತಿದ್ದು ಇಳುವರಿ ಕಡಿಮೆಯಾಗಿದೆ. ಹೀಗಾಗಿ ಮಾರುಕಟ್ಟೆಗೆ ಪೂರೈಕೆ ತಗ್ಗಿದೆ. ವರ್ತಕರಿಂದ ಬೇಡಿಕೆ ಹೆಚ್ಚಾದ ಕಾರಣ 15 ದಿನಗಳಿಂದ ಬೀನ್ಸ್ ಬೆಲೆಯಲ್ಲೂ ಹೆಚ್ಚಳವಾಗಿದೆ .**
> **-ವಿಜಯಲಕ್ಷ್ಮಿ** ಕಾರ್ಯದರ್ಶಿ ಎಪಿಎಂಸಿ ಕೋಲಾರ

ಕೆ.ಜಿ ಲೆಕ್ಕದಲ್ಲಿ ತರಕಾರಿ ಖರೀದಿ ಬಿಟ್ಟ ಮಧ್ಯಮ ವರ್ಗದ ಗ್ರಾಹಕರು ಗುಡ್ಡೆ ತರಕಾರಿಗೆ ಮೊರೆ ಹೋಗುತ್ತಿದ್ದಾರೆ. ಅದು ಕೂಡ ದುಪ್ಪಟ್ಟಾಗಿದೆ. ಕಳೆದ ವಾರ 10ರು. ರಷ್ಟಿದ್ದ ಗುಡ್ಡೆ ತರಕಾರಿ ಈ ವಾರ 20ಕ್ಕೆ ಏರಿದೆ.